# Bangalore
# Regional News
# 20.12.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ವಾರ್ಷಿಕ 9 ಲಕ್ಷ ಟನ್ ಕಾಫಿ ಉತ್ಪಾದನೆ : ಭಾರತ ಸರ್ಕಾರದ ಗುರಿ – ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
2. ಮಣ್ಣಿನ ಆರೋಗ್ಯ, ನೀರಿನ ಸಮಗ್ರ ನಿರ್ವಹಣೆಗೆ ಸರ್ಕಾರದ ಒತ್ತು – ಮುಖ್ಯಮಂತ್ರಿ ಸಿದ್ದರಾಮಯ್ಯ
3. ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ 2 ಸಾವಿರ ಬಸ್ ಖರೀದಿಗೆ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿ – ಸಚಿವ ರಾಮಲಿಂಗಾ ರೆಡ್ಡಿ
4. ಸಚಿವ ವಿ. ಸೋಮಣ್ಣ ಅವರಿಂದ ನಾಳೆ ಕೋಲಾರ ಜಿಲ್ಲೆಯ ವಿವಿಧ ರೈಲ್ವೆ ಅಭಿವೃದ್ಧಿ ಕಾಮಗಾರಿಗಳ ಲೋಕಾರ್ಪಣೆ

***************

ಪ್ರಸ್ತುತ ಭಾರತದಲ್ಲಿ ಪ್ರತಿ ವರ್ಷ 3.6 ರಿಂದ 4 ಲಕ್ಷ ಟನ್ ಕಾಫಿ ಉತ್ಪಾದನೆಯಾಗುತ್ತಿದ್ದು, ಮುಂಬರುವ ವರ್ಷಗಳಲ್ಲಿ 9 ಲಕ್ಷ ಟನ್ ಕಾಫಿ ಉತ್ಪಾದನೆಯ ಗುರಿಯನ್ನು ಭಾರತ ಸರ್ಕಾರ ಇಟ್ಟುಕೊಂಡಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ಅವರು, ಚಿಕ್ಕಮಗಳೂರಿನ ಬಾಳೆಹೊನ್ನೂರಿನಲ್ಲಿಂದು ಕೇಂದ್ರೀಯ ಕಾಫಿ ಸಂಶೋಧನಾ ಸಂಸ್ಥೆಯ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆನೇಕ ದೇಶಗಳು ಭಾರತದ ಕಾಫಿಯನ್ನು ಆಮದು ಮಾಡಿಕೊಳ್ಳಲು ಮುಂದೆ ಬಂದಿವೆ. ಭಾರತದ ಕಾಫಿಗೆ ಉತ್ತಮ ಬೇಡಿಕೆ ಇದೆ. ಗುಣಮಟ್ಟದ ಕಾಫಿ ಬೆಳೆಯುವುದು, ಉತ್ತಮವಾದ ಮಾರುಕಟ್ಟೆ ಒದಗಿಸುವುದು, ರಫ್ತು ಮಾಡುವುದು. ಈ ಎಲ್ಲಾ ವಿಚಾರಗಳ ಸಂಶೊಧನೆ ಮಾಡಲಾಗುತ್ತಿದ್ದು, ಮುಂಬರುವ ವರ್ಷಗಳಲ್ಲಿ 9 ಲಕ್ಷ ಟನ್ ಕಾಫಿ ಉತ್ಪಾದನೆಗೆ ಪ್ರಧಾನಿಯವರು ಕರೆ ನೀಡಿದ್ದಾರೆಂದು ತಿಳಿಸಿದ್ದಾರೆ.

ಧ್ವನಿ : ಪ್ರಹ್ಲಾದ್ ಜೋಷಿ

ಕಾರ್ಯಕ್ರಮದಲ್ಲಿ ಇಂಧನ ಸಚಿವ ಕೆ.ಜೆ ಜಾರ್ಜ್, ಸಂಸದ ಕೋಟಾ ಶ್ರೀನಿವಾಸ ಪೂಜಾರಿ, ಶಾಸಕರಾದ ಟಿ.ಡಿ ರಾಜೇಗೌಡ, ಹೆಚ್.ಡಿ ತಮ್ಮಯ್ಯ, ಪರಿಷತ್ ಸದಸ್ಯ ಸಿ.ಟಿ ರವಿ, ಕಾಫಿ ಮಂಡಳಿ ಅಧ್ಯಕ್ಷ ದಿನೇಶ್ ದೇವೃಂದ ಮುಂತಾದವರು ಭಾಗವಹಿಸಿದ್ದರು.

***************

ಕಬ್ಬು ಬೆಳೆಯುವ ಪ್ರದೇಶದಲ್ಲಿ ಮಣ್ಣಿನ ಆರೋಗ್ಯ ಮತ್ತು ನೀರಿನ ಸಮಗ್ರ ನಿರ್ವಹಣೆಗೆ ಸರ್ಕಾರ ಹೆಚ್ಚು ಒತ್ತು ನೀಡುತ್ತಿದೆ. ಭೂಮಿ ಜೀವದ ತೊಟ್ಟಿಲು, ಇಂತಹ ಜೀವದ ತೊಟ್ಟಿಲನ್ನು ಬಂಜೆ ಮಾಡಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಳಗಾವಿ ತಾಲೂಕಿನ ಹುದಲಿ ಗ್ರಾಮದಲ್ಲಿ ಜಿಲ್ಲಾಡಳಿತ, ಜಿಲ್ಲಾಪಂಚಾಯತ್ ಬೆಳಗಾವಿ, ಕೃಷಿ ಇಲಾಖೆ ಹಾಗೂ ಸಕ್ಕರೆ ಕಾರ್ಖಾನೆಗಳ ಸಂಯುಕ್ತ ಆಶ್ರಯದಲ್ಲಿ ಇಂದು ನಡೆದ ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಕಬ್ಬು ಬೆಳೆಯುವ ಪ್ರದೇಶದಲ್ಲಿ ಮಣ್ಣಿನ ಆರೋಗ್ಯ ಮತ್ತು ನೀರಿನ ಸಮಗ್ರ ನಿರ್ವಹಣೆ ಯೋಜನೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ರೈತರು ರಸಗೊಬ್ಬರ ಬಳಕೆಯನ್ನು ಕಡಿಮೆ ಮಾಡಬೇಕಾಗಿದೆ. ರಸಗೊಬ್ಬರ ಬಳಕೆಯಿಂದ ಹೆಚ್ಚಿನ ಇಳುವರಿ ಬರುತ್ತದೆ ಎಂಬ ತಪ್ಪು ಕಲ್ಪನೆಯಿಂದ ಹೊರಬರಬೇಕಾಗಿದೆ. ಭಾರತ ಕೃಷಿ ಪ್ರಧಾನ ರಾಷ್ಟ್ರವಾಗಿದ್ದು, ಶೇಕಡ 90ರಷ್ಟು ಕೃಷಿ ಮೇಲೆಯೇ ಅವಲಂಬಿತವಾಗಿದೆ. ನೀರಿನ ನಿರ್ವಹಣೆ ಕುರಿತು ಪ್ರತಿಯೊಬ್ಬರು ತಿಳಿದುಕೊಂಡು ನೀರನ್ನು ಮಿತವಾಗಿ ಬಳಸಬೇಕು. ಈ ಕುರಿತು ಕೃಷಿ ಇಲಾಖೆ ಪ್ರತಿ ರೈತರ ಹತ್ತಿರ ಹೋಗಿ ಇಲಾಖೆಯಿಂದ ಪರಿಚಯಿಸಲಾಗುವ ಹೊಸ ತಳಿಗಳ ಕುರಿತು ಮಾಹಿತಿ ನೀಡಬೇಕು. ಕಳೆದ ಆಯವ್ಯಯಲ್ಲಿ ಘೋಷಿಸಿದಂತೆ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿ, ರಾಜ್ಯದ ಕಬ್ಬು ಬೆಳೆಗಾರರಿಗೆ ಅನುಕೂಲವಾಗಬೇಕು. ಬೆಳೆಯಲ್ಲಿ ಆಧುನಿಕ ತಂತ್ರಜ್ಞಾನ ಬಳಸಿಕೊಳ್ಳುವುದರ ಮೂಲಕ ಉತ್ತಮ ಆದಾಯ ಪಡೆಯಬೇಕೆನ್ನುವ ಉದ್ದೇಶದಿಂದ ಕಬ್ಬು ಬೆಳೆಯುವ ಪ್ರದೇಶದಲ್ಲಿ ಮಣ್ಣಿನ ಆರೋಗ್ಯ, ನೀರಿನ ಸಮಗ್ರ ನಿರ್ವಹಣೆ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಕಬ್ಬು ಕಟಾವು ಯಂತ್ರಗಳನ್ನು ಸಬ್ಸಿಡಿ ಮೂಲಕ ವಿತರಿಸುತ್ತಿರುವುದು ರಾಷ್ಟ್ರಕ್ಕೆ ಮಾದರಿಯಾಗಿದೆ ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಉಪಸ್ಥಿತರಿದ್ದರು.

***************

ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಅನುಕಂಪದ ಆಧಾರದ ಮೇಲೆ ಒಂದು ಸಾವಿರ ಹಾಗೂ ನೇರ ನೇಮಕಾತಿ 9 ಸಾವಿರ ಸೇರಿದಂತೆ ಹತ್ತು ಸಾವಿರ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳಲಾಗಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಖಾತೆ ಸಚಿವ ರಾಮಲಿಂಗಾ ರೆಡ್ಡಿ ಹೇಳಿದರು.

ವಿಜಯಪುರದಲ್ಲಿ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ 102 ನೂತನ ನಗರ ಸಾರಿಗೆ ವಾಹನಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ನಗರಗಳ ವ್ಯಾಪ್ತಿ ವೃದ್ಧಿಸುತ್ತಿದೆ. ಸುಗಮ ಸಾರಿಗೆ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಹೆಚ್ಚುವರಿ 112 ಬಸ್‌ಗಳನ್ನು ಹಂಚಿಕೆ ಮಾಡಲಾಗಿದೆ. ಪ್ರಸ್ತುತವಾಗಿ ನೂತನ 102 ಹೊಸ ನಗರ ಸಾರಿಗೆ ವಾಹನ ಬಸ್‌ಗಳನ್ನು ಲೋಕಾರ್ಪಣೆ ಮಾಡಲಾಗಿದೆ. ಇದರಲ್ಲಿ 27 ಬಸ್‌ಗಳು ವಿಜಯಪುರ ವಿಭಾಗಕ್ಕೆ ಹಂಚಿಕೆಯಾಗಿದ್ದು, ಇಂದು ನೂತನ ಸಾರಿಗೆ ವಾಹನಗಳಿಗೆ ಚಾಲನೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಮುಂದಿನ ಎರಡು ತಿಂಗಳಲ್ಲಿ 20 ನಾನ್ ಎಸಿ ಸ್ಲೀಪರ್, 20 ಎಸಿ ಸ್ಲೀಪರ್ ಹಾಗೂ 16 ಎ.ಸಿ. ಸೀಟರ್ ಸೇರಿದಂತೆ ಒಟ್ಟು 56 ಹೊಸ ವಾಹನಗಳ ಖರೀದಿಗೆ ಆದೇಶ ಹೊರಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಕೆಕೆಆರ್ಟಿಸಿ 400 ಬಸ್‌ಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿದ್ದು, ಮುಂದಿನ ಎರಡ್ಮೂರು ತಿಂಗಳಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳಲಿದೆ. ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಘೋಷಿಸಿದಂತೆ 2 ಸಾವಿರ ಬಸ್‌ಗಳ ಖರೀದಿಗೆ ಟೆಂಡರ್ ಪ್ರಕ್ರಿಯೆಯಲ್ಲಿದೆ ಎಂದು ಹೇಳಿದರು.

***************

ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ನಾಳೆ ಕೋಲಾರ ಜಿಲ್ಲೆಯಲ್ಲಿ ವಿವಿಧ ರೈಲ್ವೆ ಅಭಿವೃದ್ಧಿ ಕಾಮಗಾರಿಗಳ ಲೋಕಾರ್ಪಣೆ ಹಾಗೂ ಪರಿಶೀಲನಾ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ನಾಳೆ ಕೋಲಾರ ಜಿಲ್ಲೆಯ ಟೇಕಲ್ ರೈಲ್ವೆ ನಿಲ್ದಾಣದಲ್ಲಿ ಲೆವೆಲ್ ಕ್ರಾಸಿಂಗ್ ಬದಲಿಗೆ ನಿರ್ಮಿಸಲಾದ ರೈಲ್ವೆ ಮೇಲ್ಸೇತುವೆಯ ಲೋಕಾರ್ಪಣೆ ಮಾಡಲಿದ್ದಾರೆ.

ನವೀಕರಿಸಲಾದ ಉರಗಾಂ ರೈಲ್ವೆ ನಿಲ್ದಾಣ, ಕೊರಮಂಡಲ ರೈಲ್ವೆ ನಿಲ್ದಾಣಗಳನ್ನು ಲೋಕಾರ್ಪಣೆ ಮಾಡಲಿದ್ದು, ಬಂಗಾರಪೇಟೆ ರೈಲ್ವೆ ನಿಲ್ದಾಣ, ಹಾಗೂ ಕೋಲಾರ ರೈಲ್ವೆ ನಿಲ್ದಾಣದ ಕಾಮಗಾರಿ ಪರಿಶೀಲನೆ ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ.

***************

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆ, ತೋಟಗಾರಿಕೆ ಕೃಷಿ ಹಾಗೂ ಕೃಷಿ ಸಂಬಂಧಿತ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ 'ಮೌಲ್ಯವರ್ಧನೆ ಹಾಗೂ ರಫ್ತು ಅವಕಾಶಗಳಿಗಾಗಿ ನಿಖರ ತೋಟಗಾರಿಕೆ' ಎಂಬ ಧ್ಯೇಯದೊಂದಿಗೆ ತೋಟಗಾರಿಕಾ ಮೇಳ-2025 ಅನ್ನು ಹಮ್ಮಿಕೊಳ್ಳಳಾಗಿದೆ.

ವಿಶ್ವವಿದ್ಯಾಲಯದ ಆವರಣದಲ್ಲಿ ನಾಳೆಯಿಂದ ಇದೇ 23ರವರೆಗೆ ನಡೆಯಲಿರುವ ತೋಟಗಾರಿಕಾ ಮೇಳದಲ್ಲಿ ತೋಟಗಾರಿಕೆಯಲ್ಲಿ ಆಧುನಿಕ ತಂತ್ರಜ್ಞಾನಗಳ ಬಳಕೆ, ಹವಾಮಾನದ ಸಮನ್ವಯ ನಿರ್ವಹಣೆ, ಜಿಪಿಎಸ್, ಜಿಐಎಸ್ ಸಂವೇದಕ ತಂತ್ರಜ್ಞಾನಗಳ ಮಾಹಿತಿ, ತೋಟಗಾರಿಕೆ ಬೆಳೆಗಳಲ್ಲಿ ಡ್ರೋನ್‌ಗಳ ಬಳಕೆ ಸೇರಿದಂತೆ ಹಲವಾರು ವಿಷಯಗಳ ಕುರಿತು ಮಾಹಿತಿ ನೀಡಲಾಗುತ್ತದೆ.

***************

ಕನಕಪುರದ ಡಾ. ಅಂಬೇಡ್ಕರ್ ಪುರ ಭವನದಲ್ಲಿ ರಾಜ್ಯದ ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಕನಕಪುರ ತಾಲ್ಲೂಕಿಗೆ ಸಂಬಂಧಿಸಿದಂತೆ ಲೋಕಾಯುಕ್ತದಲ್ಲಿ ಬಾಕಿ ಉಳಿದಿರುವ ಪ್ರಕರಣಗಳ ವಿಚಾರಣೆ ಕಾರ್ಯಕ್ರಮಕ್ಕೆ ಇಂದು ಚಾಲನೆ ನೀಡಿದರು.

***************

ಭಾರತ ಸರ್ಕಾರದ ಸಿಬ್ಬಂದಿ, ಸಾರ್ವಜನಿಕ ಅಹವಾಲುಗಳು ಮತ್ತು ಪಿಂಚಣಿ ಸಚಿವಾಲಯದ ಆಡಳಿತ ಸುಧಾರಣೆ ಮತ್ತು ಸಾರ್ವಜನಿಕ ಅಹವಾಲುಗಳ ಇಲಾಖೆ ವತಿಯಿಂದ ಇದೇ 25 ರವರೆಗೆ 'ಸುಶಾಸನ ಸಪ್ತಾಹ – ಪ್ರಶಾಸನ್ ಗಾಂವ್ ಕಿ ಓರ್' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರಿಗೆ ಸರ್ಕಾರದ ಸೇವೆಗಳ ಲಭ್ಯತೆ, ಪಾರದರ್ಶಕತೆ ಮತ್ತು ಅರಿವು ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸಬೇಕಾಗಿದ್ದು, ಸಾರ್ವಜನಿಕ ಕುಂದು ಕೊರತೆಗಳಿಗೆ ತ್ವರಿತ ಪರಿಹಾರ ಮತ್ತು ಸೇವಾ ವಿತರಣೆಯನ್ನು ಸುಧಾರಿಸುವುದು ಸಪ್ತಾಹದ ಮುಖ್ಯ ಉದ್ದೇಶವಾಗಿದೆ.

***************

ಕೋಲಾರ ಜಿಲ್ಲೆಯ ನರಸಾಪುರ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ನಿರ್ಮಿಸಲಾಗಿರುವ ನೂತನ ಮೇಲ್ಸೇತುವೆಯನ್ನು ಸಂಸದ ಎಂ.ಮಲ್ಲೇಶ್ ಬಾಬು ಉದ್ಘಾಟಿಸಿದರು.

ನಂತರ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಬೆಳ್ಳೂರು ಮತ್ತು ನರಸಾಪುರ ಕೈಗಾರಿಕಾ ವಲಯದ ಮೇಲ್ಸೇತುವೆಯನ್ನು ಸುಮಾರು 28 ಕೋಟಿ 3 ಲಕ್ಷ ರೂಪಾಯಿ ವೆಚ್ಚದಲ್ಲಿ 1.6 ಕಿಲೋಮೀಟರ್ ನಿರ್ಮಿಸಲಾಗಿದ್ದು, ಸಾರ್ವಜನಿಕರು ಸಂಚರಿಸಲು ಮುಕ್ತವಾಗಿದೆ ಎಂದರು.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ಚುನಾವಣೆ ಹಾಗೂ ನಗರಸಭೆಯ 21ನೇ ವಾರ್ಡ್‌ನ ಉಪ ಚುನಾವಣೆ ನಾಳೆ ನಡೆಯಲಿದ್ದು, ಚುನಾವಣಾ ಆಯೋಗ ಸಕಲ ಸಿದ್ದತೆಗಳನ್ನು ಕೈಗೊಂಡಿದೆ.

ದೊಡ್ಡಬಳ್ಳಾಪುರದ ಮಸ್ಟರಿಂಗ್ ಕೇಂದ್ರದಲ್ಲಿ ವಿದ್ಯುನ್ಮಾನ ಮತ ಯಂತ್ರಗಳು ಹಾಗೂ ಅಗತ್ಯ ಪರಿಕರಗಳೊಂದಿಗೆ ಮತಗಟ್ಟೆ ಅಧಿಕಾರಿಗಳು ಮತಗಟ್ಟೆಗಳಿಗೆ ತೆರಳಿದ್ದಾರೆ.

ಚುನಾವಣೆ ಶಾಂತಿ ಮತ್ತು ಸುವ್ಯವಸ್ಥಿತ ವಾಗಿ ನಡೆಯಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ.

*******ಮುಕ್ತಾಯ********